# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 09.06.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ಇಂದು ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದ ಕೆಲವು ವಾರ್ಡ್‍ಗಳಲ್ಲಿ ಸ್ವಚ್ಛತಾ ಆಂದೋಲನಾ ನಡೆಸಿದರು. ಈ ಸಂದರ್ಭದಲ್ಲಿ ಬಿ.ಬಿ.ಎಂ.ಪಿ. ಆಸ್ತಿಯಲ್ಲಿ ಭೋಗ್ಯದ ಆಧಾರದ ಮೇಲೆ ಶಾಲೆ ನಡೆಸುತ್ತಿರುವ ವೈಯಾಲಿಕಾವಲ್ ಶಿಕ್ಷಣ ಸಂಸ್ಥೆ ಹಾಗೂ ತೆಲುಗು ವಿಜ್ಞಾನ ಸಮಿತಿಗೆ ಭೇಟಿ ನೀಡಿ, ಈ ಶಾಲೆಗಳು ವಿಶಾಲವಾದ ಆವರಣಗಳನ್ನು ಹೊಂದಿರುವುದರಿಂದ ಇಲ್ಲಿ ಕಡ್ಡಾಯವಾಗಿ ಮಳೆ ನೀರಿನ ಕೊಯ್ಲು ಘಟಕಗಳನ್ನು ಸ್ಥಾಪಿಸುವಂತೆ ಸಂಸ್ಥೆಯವರಿಗೆ ಆದೇಶ ನೀಡಿದರು. ಮಳೆ ನೀರು ಕೊಯ್ಲು ಘಟಕವನ್ನು ಅಳವಡಿಸದಿದ್ದರೆ ಶಾಲೆಗೆ ನೀಡಿರುವ ಭೋಗ್ಯದ ಕರಾರನ್ನು ರದ್ದುಪಡಿಸಲಾಗುವುದೆಂದು ಎಚ್ಚರಿಕೆ ನೀಡಿದರು.

ಆಯುಕ್ತರು ಇಂದು ಮುಂಜಾನೆ 6.00 ಗಂಟೆಯಿಂದ ಮಲ್ಲೇಶ್ವರಂ ಸಂಪಿಗೆ ರಸ್ತೆ, ಎಂ.ಡಿ.ಬ್ಲಾಕ್, ಮಾರ್ಗೋಸಾ ರಸ್ತೆ, ವೈಯಾಲಿಕಾವಲ್, ಸ್ಯಾಂಕಿ ರಸ್ತೆ ಮತ್ತು ಮಲ್ಲೇಶ್ವರಂನ ಕೆಲವು ಅಡ್ಡರಸ್ತೆಗಳಲ್ಲಿ ಸ್ವಚ್ಛತಾ ಆಂದೋಲನಾ ನಡೆಸಿದರು. ಈ ಸಂದರ್ಭದಲ್ಲಿ ಪಾದಚಾರಿ ಮಾರ್ಗಗಳ ಮೇಲೆ ಹಾಕಲಾದ ತ್ಯಾಜ್ಯ, ಕಲ್ಲು, ಮಣ್ಣುಗಳನ್ನು ತಕ್ಷಣ ತೆರವುಗೊಳಿಸಿ, ಟ್ರಾಕ್ಟರ್‍ಗಳಲ್ಲಿ ಹೊರಸಾಗಿಸಲಾಯಿತು.

ಮಾಮ್ಡನ್ ಬ್ಲಾಕ್‍ನಲ್ಲಿ ಸಾರ್ವಜನಿಕರು ಪಾದಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡು, ವಾಹನಗಳ ಓಡಾಟಕ್ಕೆ ಅಡಚಣೆಯುಂಟು ಮಾಡುತ್ತಿರುವುದನ್ನು ಮತ್ತು ಪಾದಚಾರಿ ಮಾರ್ಗದ ಮೇಲೆ ಸಾಕಷ್ಟು ಪ್ರಮಾಣದಲ್ಲಿ ಕಟ್ಟಡದ ಅವಶೇಷಗಳನ್ನು ಹಾಕಿರುವುದನ್ನು ಗಮನಿಸಿದ ಆಯುಕ್ತರು ಸ್ಥಳದಲ್ಲಿದ್ದ ಅಭಿಯಂತರರುಗಳಿಗೆ ಸೂಚನೆ ನೀಡಿ, ಸ್ವಚ್ಛತಾ ಕಾರ್ಯ ಕೈಗೊಂಡರು.

ಮಲ್ಲೇಶ್ವರಂ 9ನೇ ಅಡ್ಡರಸ್ತೆಯಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಾಣ ಮಾಡುತ್ತಿರುವ ವ್ಯಕ್ತಿಯೊಬ್ಬರು ಕಟ್ಟಡದ ಅವಶೇಷಗಳನ್ನು ರಸ್ತೆ ಮೇಲೆ ಸುರಿದಿದ್ದರು. ಇದರಿಂದ ಪಾದಚಾರಿ ಮಾರ್ಗ ಸಂಪೂರ್ಣವಾಗಿ ಒತ್ತುವರಿಗೊಂಡು, ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗಿರುತ್ತದೆ. ಆಯುಕ್ತರು ಅದನ್ನು ಕೂಡಲೇ ತೆರವುಗೊಳಿಸುವಂತೆ ಮತ್ತು ಆ ಕಟ್ಟಡದ ಮಾಲೀಕರ ಮೇಲೆ 1.00 ಲಕ್ಷ ರೂ.ಗಳು ದಂಡ ವಿಧಿಸಲು ಕಾರ್ಯಪಾಲಕ ಅಭಿಯಂತರರಿಗೆ ಸೂಚನೆ ನೀಡಿದರು.

ತದನಂತರ ಆಯುಕ್ತರು, ವೈಯಾಲಿಕಾವಲ್ ಆಟದ ಮೈದಾನ, ಮಲ್ಲೇಶ್ವರಂ 18ನೇ ಅಡ್ಡರಸ್ತೆಯಲ್ಲಿರುವ ಸರ್ಕಾರಿ ಕಾಲೇಜು ಆಟದ ಮೈದಾನ, ಸ್ಯಾಂಕಿ ಕೆರೆಯ ಟ್ಯಾಂಕ್ ಬಂಡ್ ಪಕ್ಕದಲ್ಲಿ ಖಾಲಿ ಇರುವ ಜಾಗದಲ್ಲಿ ಮತ್ತು ಸರ್ಕಾರಿ ಸ್ವಾಮ್ಯದಲ್ಲಿರುವ ಕಛೇರಿಗಳ ಆವರಣ ಪರಿಶೀಲನೆ ನಡೆಸಿದರು. ಈ ಪ್ರದೇಶದಲ್ಲಿ ಕಛೇರಿಗಳು, ಶಾಲಾ-ಕಾಲೇಜುಗಳು ಮತ್ತು ಖಾಸಗಿಯವರಿಗೆ ಸೇರಿದ ನೂರಾರು ಎಕರೆ ಖಾಲಿ ಜಾಗಗಳಲ್ಲಿ ಮಳೆ ನೀರು ಕೊಯ್ಲು ಘಟಕಗಳನ್ನು ಅಳವಡಿಸುವಂತೆ ಎಲ್ಲರಿಗೂ ಪತ್ರದ ಮುಖೇನ ಮತ್ತು ಖುದ್ದಾಗಿ ಭೇಟಿಯಾಗಿ ಸರ್ಕಾರವು ಮಳೆ ನೀರು ಕೊಯ್ಲು ಕಡ್ಡಾಯಗೊಳಿಸಿರುವ ಬಗ್ಗೆ ತಿಳುವಳಿಕೆ ನೀಡಿ, ಘಟಕಗಳನ್ನು ಅಳವಡಿಸುವಂತೆ ಕ್ರಮಜರುಗಿಸಲು ವಲಯ ಜಂಟಿ ಆಯುಕ್ತರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸ್ಥಳೀಯ ಶಾಸಕರಾದ ಡಾ|| ಸಿ.ಎನ್. ಅಶ್ವತ್ಥ ನಾರಾಯಣ, ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ಅಧ್ಯಕ್ಷರಾದ ಶ್ರೀ ಜಿ. ಮಂಜುನಾಥ ರಾಜು, ಪಾಲಿಕೆ ಸದಸ್ಯರಾದ ಶ್ರೀ ಆರ್.ಎಸ್. ಸತ್ಯನಾರಾಯಣ, ಡಾ|| ಎಂ.ಎಸ್. ಶಿವಪ್ರಸಾದ್, ಶ್ರೀಮತಿ ಎಂ. ವಿಜಯಕುಮಾರಿ, ಮುಂತಾದವರು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 09.06.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಬೊಮ್ಮನಹಳ್ಳಿ ವಲಯದ ಅರಕೆರೆ ಪ್ರದೇಶದಲ್ಲಿ ಸೌತ್ ಸಿಟಿ ಅಪಾರ್ಟ್‌ಮೆಂಟ್ ಮಧ್ಯೆ ಹಾದು ಹೋಗಿರುವ ರಸ್ತೆಯನ್ನು ಅತಿಕ್ರಮಿಸಿ, ಸಾರ್ವಜನಿಕರ ಓಡಾಟಕ್ಕೆ ತೊಂದರೆ ಮಾಡಿರುವ ಹಿನ್ನೆಲೆಯಲ್ಲಿ ಬೊಮ್ಮನಹಳ್ಳಿ ವಲಯದ ಜಂಟಿ ಆಯುಕ್ತರು ಇಂದು ಕಾರ್ಯಾಚರಣೆ ನಡೆಸಿ, ಸೌತ್ ಸಿಟಿ ಅಪಾರ್ಟ್‌ಮೆಂಟ್‌ನ ಕಾಂಪೌಂಡ್ ಗೋಡೆಯನ್ನು ತೆರವುಗೊಳಿಸಿದರು. ಈ ರಸ್ತೆ ಮುಖಾಂತರ ಸಾರ್ವಜನಿಕರ ಓಡಾಟಕ್ಕೆ ಅನುವು ಮಾಡಿಕೊಡಲಾಗಿದೆ ಎಂದು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**